**ಸಾಕ್ಷಿಯನ್ನು ದಿಃ 28.06.2023 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ ಟಿ ಹೆಚ್ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ನಮೂದಿಸಿರುವ ಎಲ್ಲಾ ವಿಷಯಗಳು ಸರಿಯಾಗಿ ಮತ್ತು ಸತ್ಯವಾಗಿರುತ್ತವೆ. ಅದಕ್ಕೆ ನನ್ನ ಸಹಿ ಇರುತ್ತದೆ ಮತ್ತು ಈ ಕೆಳಗಿನ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ಪ್ರಥಮ ವರ್ತಮಾನ ವರದಿಯ ಯಥಾ ನಕಲನ್ನು ನಿಪಿ. 1 ಎಂದು, ದೂರಿನ ಯಥಾ ನಕಲನ್ನು ನಿಪಿ. 2 ಎಂದು, ಸ್ಥಳ ಪಂಚನಾಮೆಯ ಯಥಾ ನಕಲನ್ನು ನಿಪಿ. 3 ಎಂದು, ಗಾಯದ ಪ್ರಮಾಣ ಪತ್ರದ ಯಥಾ ನಕಲನ್ನು ನಿಪಿ. 4 ಎಂದು, ಎಂವಿಎ ವರದಿಯ ಯಥಾ ನಕಲನ್ನು ನಿಪಿ. 5 ಎಂದು, ಕಚ್ಚಾ ನಕ್ಷೆಯ ಯಥಾ ನಕಲನ್ನು ನಿಪಿ. 6 ಎಂದು, ಅಂತಿಮ ದೋಷಾರೋಪಣಾ ಪಟ್ಟಿಯ ಯಥಾ ನಕಲನ್ನು ನಿಪಿ. 7 ಎಂದು, ಆಧಾರ್ ಕಾರ್ಡ ಮತ್ತು ಪಾನ್ ಕಾರ್ಡ ನ ನೋಟರೈಸ್ಡ್ ಪ್ರತಿಗಳನ್ನು ಹಾಜರುಪಡಿಸಿದ್ದು, ಅವುಗಳ ಮೂಲ ದಾಖಲೆಗಳೊಂದಿಗೆ ಹೋಲಿಕೆ ಮಾಡಿ ನೋಡಿ ಸರಿ ಇರುವುದು ಕಂಡು ಬಂದಿರುವುದರಿಂದ ನಿಪಿ. 8 ಮತ್ತು 9 ಎಂದು, ಪಾಸ್ ಬುಕ್ ನ ನೋಟರೈಸ್ಡ್ ಪ್ರತಿಯನ್ನು ಹಾಜರುಪಡಿಸಿದ್ದು, ಅದರ ಮೂಲ ದಾಖಲೆಯೊಂದಿಗೆ ಹೋಲಿಕೆ ಮಾಡಿ ನೋಡಿ ಸರಿ ಇರುವುದು ಕಂಡು ಬಂದಿರುವುದರಿಂದ ನಿಪಿ. 10 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶವನ್ನು ಕೋರಿದ್ದು, ನೀಡಲಾಯಿತು)

(ನಿಪಿ. 8 ರಿಂದ 10 ರ ಮೂಲ ದಾಖಲೆಗಳನ್ನು ಪರಿಶೀಲಿಸಿ ಸಾಕ್ಷಿಗೆ ಹಿಂದಿರುಗಿಸಲಾಯಿತು)

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಪ್ರಧಾನ ಲಘು ವ್ಯವಹಾರಗಳ ನ್ಯಾಯಾಧೀಶರು
ಮತ್ತು ಎಂ.ಎ.ಸಿ.ಟಿ., ಮೈಸೂರು.